563 (615) ಶ್ರೀ ನರೇಂದ್ರಬಾಬು ನೆ.ಲ. (ರಾಜಾಜಿನಗರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ನಗರದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ಬಾಲಕ–ಬಾಲಕಿಯವರ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು: (ವಿವರ ಒದಗಿಸುವುದು)

ಆ) ನಗರದಲ್ಲಿ ಖಾಸಗಿ ಸಂಘ ಸಂಸ್ಥೆಗಳ ನೇತೃತ್ವದಲ್ಲಿ ಸರ್ಕಾರದಿಂದ ಅನುದಾನ ಮತ್ತು ಅನುದಾನ ಪಡೆಯದೇ ಇರುವ ಬಾಲಕ–ಬಾಲಕಿಯರ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು:

ಇ) ಇವುಗಳ ಪೈಕಿ ಸರ್ಕಾರದ ಅನುಮತಿ ಪಡೆಯಲಾದ ಸಂಸ್ಥೆಗಳೆಷ್ಟು:

ಈ) ಖಾಸಗಿ ವಿದ್ಯಾರ್ಥಿನಿಲಯಗಳನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: (ವಿವರ ಒದಗಿಸುವುದು):

ಉ) ಸರ್ಕಾರಿ ಮತ್ತು ಸರ್ಕಾರೇತರ ವಿದ್ಯಾರ್ಥಿನಿಲಯಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಊ) ಹಾಗಿದ್ದಲ್ಲಿ ಸರ್ಕಾರ ಈ ಸೌಕರ್ಯಗಳನ್ನು ಒದಗಿಸಲು ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) ಸಮಾಜ ಕಲ್ಯಾಣ ಇಲಾಖೆಯು ಬೆಂಗಳೂರು ನಗರ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಯ ಬಾಲಕ ಬಾಲಕಿಯರಿಗಾಗಿ 37 ಮೆಟ್ರಿಕ್ ಪೂರ್ವ ಹಾಗೂ 15 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಒಟ್ಟು 52 ವಿದ್ಯಾರ್ಥಿನಿಲಯಗಳನ್ನು ನಡೆಸುತ್ತಿದೆ. ವಿವರ ಕೆಳಕಂಡಂತಿದೆ:

ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು			ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು		
ಬಾಲಕರು	ಬಾಲಕಿಯರು	ಒಟ್ಟು	ಬಾಲಕರು	ಬಾಲಕಿಯರು	ಒಟ್ಟು
27	10	37	11	4	15

ಆ) ನಗರದಲ್ಲಿ ಸರ್ಕಾರದಿಂದ ಅನುದಾನ ಪಡೆದು 11 ಖಾಸಗಿ ಮೆಟ್ರಿಕ್ ಪೂರ್ವ, 1 ಮೆಟ್ರಿಕ್ ನಂತರದ ಒಟ್ಟು 12 ಅನುದಾನಿತ ವಿದ್ಯಾರ್ಥಿನಿಲಯಗಳನ್ನು ನಡೆಸಲಾಗುತ್ತಿದೆ. ವಿವರ ಕೆಳಕಂಡಂತೆ ಇದೆ:

ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು			ಖಾಸಗಿ ಅನುದಾನಿತ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು		
ಬಾಲಕರು	ಬಾಲಕಿಯರು	ಒಟ್ಟು	ಬಾಲಕರು	ಬಾಲಕಿಯರು	ಒಟ್ಟು
10	1	11	01	–	01

ಸರ್ಕಾರದಿಂದ ಅನುಮತಿ ಪಡೆಯದೆ ಖಾಸಗಿ ಸಂಘ ಸಂಸ್ಥೆಗಳ ನೇತೃತ್ವದಲ್ಲಿ ನಡೆಸುತ್ತಿರುವ ವಿದ್ಯಾರ್ಥಿನಿಲಯಗಳು ನಿಖರವಾಗಿ ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. ವಿದ್ಯಾರ್ಥಿನಿಲಯಗಳು ತಮ್ಮ ಆರ್ಥಿಕ ಮೂಲಗಳಿಂದ ಸಮಾಜದ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ನಡೆಸುತ್ತಿದ್ದು, ಅವುಗಳ ದಾಖಲಾತಿ ನಿರ್ವಹಣೆ ಕುರಿತ ಯಾವುದೇ ಮಾಹಿತಿ ಇಲಾಖೆಯಲ್ಲಿ ಲಭ್ಯವಿಲ್ಲ. ಅವುಗಳು ಇಲಾಖೆಯ ನಿಯಂತ್ರಣಕ್ಕೆ ಒಳಪಟ್ಟಿರುವುದಿಲ್ಲ.

ಇ) ಇವುಗಳಲ್ಲಿ 11 ಮೆಟ್ರಿಕ್ ಪೂರ್ವ ಹಾಗೂ 1 ಮೆಟ್ರಿಕ್ ನಂತರದ ಅನುದಾನಿತ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಸರ್ಕಾರದಿಂದ ಅನುಮತಿ ನೀಡಲಾಗಿರುತ್ತದೆ.

ಈ) ಇಲಾಖೆಯಿಂದ ಮಾನ್ಯತೆಗೊಂಡು ಸರ್ಕಾರಿ ಅನುದಾನದಿಂದ ನಡೆಸಲ್ಪಡುವ ಖಾಸಗಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಕಾಲ ಕಾಲಕ್ಕೆ ತಪಾಸಣೆ ನಡೆಸಿ, ವಿದ್ಯಾರ್ಥಿನಿಲಯಗಳ ನಿರ್ವಹಣೆಯನ್ನು ಪರಿಶೀಲಿಸಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿಯಿಂದ ತಪಾಸಣೆಯನ್ನು ನಡೆಸಲಾಗುತ್ತಿದೆ. ಆದರೆ ಸರ್ಕಾರದಿಂದ ಮಾನ್ಯತೆಯನ್ನು ಪಡೆಯದೆ ಸರ್ಕಾರದಿಂದ ಯಾವುದೇ ಅನುದಾನ ಪಡೆಯದೆ ನಡೆಸುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳ ನಿಯಂತ್ರಣಕ್ಕೆ ಯಾವುದೇ ನಿಯಮಾವಳಿಗಳು ಇರುವುದಿಲ್ಲ.

ಉ) ಹೌದು.

ಊ) ಬೆಂಗಳೂರು ನಗರ ಜಿಲ್ಲೆಯ ಸರ್ಕಾರಿ ವಿದ್ಯಾರ್ಥಿನಿಲಯಗಳಿಗೆ ರಾಜ್ಯ ಹಾಗೂ ಜಿಲ್ಲಾವಲಯಗಳಡಿ ಮೂಲಭೂತ ಸೌಲಭ್ಯಗಳಾದ ಹಾಸಿಗೆ, ಹೊದಿಗೆ, ಮಂಚ, ಟೇಬಲ್‌ಗಳು, ಟಿ.ವಿ. ಸೋಲಾರ್ ವಾಟರ್ ಹೀಟರ್, ಯು.ಪಿ.ಎಸ್. ಪಾತ್ರೆಗಳು, ಆಟದ ಸಾಮಗ್ರಿಗಳು ಇತ್ಯಾದಿಗಳನ್ನು ಅನುದಾನದ ಲಭ್ಯತೆಗೆ ಅನುಗುಣವಾಗಿ ಒದಗಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಈ ಬಾಬ್ತಿಗಾಗಿ ರೂ. 15.00 ಲಕ್ಷಗಳನ್ನು ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಆಯವ್ಯಯದಲ್ಲಿ ನಿಗದಿಗೊಳಿಸಿದ್ದು, ಅವಶ್ಯಕತೆ ಇರುವ ವಿದ್ಯಾರ್ಥಿನಿಲಯಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಖಾಸಗಿ ಅನುದಾನಿತ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ನಿಯಮಾವಳಿಯಲ್ಲಿ ಅವಕಾಶವಿರುವುದಿಲ್ಲ. ಸಂಬಂಧಪಟ್ಟ ಸಂಸ್ಥೆಯೇ ಭರಿಸಬೇಕಾಗುತ್ತದೆ.

564 (901) ಶ್ರೀ ಪಾಟೀಲ್ ಬಿ.ಸಿ. (ಹಿರೇಕೆರೂರು) : ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಿರೇಕೆರೂರು ತಾಲ್ಲೂಕಿನ ಪಶುಸಂಗೋಪನಾ ಆಸ್ಪತ್ರೆಗಳಲ್ಲಿರುವ ವೈದ್ಯರ ಸಂಖ್ಯೆ ಎಷ್ಟು;